ಫ್ಯಾಕ್ಸ್ : 080 – 2202 8041 ದೂರವಾಣಿ : 080 – 2202 8032

ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015–16 ದಿನಾಂಕ: 1–1–2016

# ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | ಹೊರರಾಜ್ಯಗಳ ವಿಶ್ವವಿದ್ಯಾಲಯಗಳಲ್ಲಿ ಕನ್ನಡ ಸ್ನಾತಕೋತ್ತರ ಪದವಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ 2015–16 ನೇ ಸಾಲಿನ ವಿದ್ಯಾರ್ಥಿವೇತನ ವಿತರಣಾ ಸಮಾರಂಭ<br><br>ಉದ್ಘಾಟನೆ:<br><br>ಶ್ರೀ ಟಿ.ಬಿ. ಜಯಚಂದ್ರ,]<br>ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಉನ್ನತ ಶಿಕ್ಷಣ ಸಚಿವರು<br><br>ವಿದ್ಯಾರ್ಥಿ ವೇತನ ವಿತರಣೆ:<br><br>ಶ್ರೀಮತಿ ಉಮಾಶ್ರೀ,<br>ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು<br><br>ಅಧ್ಯಕ್ಷತೆ:<br><br>ಶ್ರೀ ಆರ್. ರೋಷನ್‌ಬೇಗ್,<br>ಮೂಲ ಸೌಲಭ್ಯ ಅಭಿವೃದ್ಧಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಹಾಗೂ ಹಜ್ ಸಚಿವರು | 2–1–2016<br>ಶನಿವಾರ<br>ಬೆಳಿಗ್ಗೆ<br>11–30 ಗಂಟೆಗೆ | ಸಮ್ಮೇಳನ ಸಭಾಂಗಣ,<br>ಕೊಠಡಿ ಸಂಖ್ಯೆ 419, 4ನೇ ಮಹಡಿ,<br>ವಿಕಾಸ ಸೌಧ,<br>ಬೆಂಗಳೂರು |

ನಿರ್ದೇಶಕರ ಪರವಾಗಿ

## ಮಾಧ್ಯಮದವರ ಗಮನಕ್ಕೆ

ಆನೇಕಲ್ ತಾಲ್ಲೂಕು ಜಿಗಣಿಯಲ್ಲಿ ನಡೆಯಲಿರುವ ಮಾನ್ಯ ಪ್ರಧಾನ ಮಂತ್ರಿಯವರ ಕಾರ್ಯಕ್ರಮಕ್ಕೆ ಬೆಂಗಳೂರು ಗ್ರಾಮಾಂತರ ಜಿಲ್ಲಾ ಪೊಲೀಸ್ ಅಧೀಕ್ಷಕರ ಕಚೇರಿ, ಮಿಲ್ಲರ್ಸ್ ರಸ್ತೆ, ಬೆಂಗಳೂರು ಇಲ್ಲಿ ಪ್ರವೇಶ ಭದ್ರತಾ ರಹದಾರಿ ಪತ್ರಗಳನ್ನು ವಿತರಿಸಲಾಗುತ್ತದೆ.

ಈ ಕಾರ್ಯಕ್ರಮದ ವರದಿಗಾಗಿ ನಿಯೋಜಿತರಾಗಿರುವ ರಾಜ್ಯ ಮತ್ತು ರಾಷ್ಟ್ರಮಟ್ಟದ ದಿನಪತ್ರಿಕೆಗಳು, ಹಾಗೂ ಪ್ರಮುಖ ಸುದ್ದಿ ವಾಹಿನಿಗಳ ಮಾನ್ಯತೆ ಪಡೆದ ಮಾಧ್ಯಮ ಪ್ರತಿನಿಧಿಗಳ ಹೆಸರು ನೀಡಿ ಕಾರ್ಯಕ್ರಮದ ಆಹ್ವಾನ ಪತ್ರವನ್ನು ಉಪ ನಿರ್ದೇಶಕರು, ಬೆಂಗಳೂರು ನಗರ ಜಿಲ್ಲೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಎರಡನೇ ಮಹಡಿ, ವಾರ್ತಾ ಸೌಧ, ಬೆಂಗಳೂರು ಇವರಿಂದ ದಿನಾಂಕ 2-1-2016 ರಂದು ಬೆಳಗ್ಗೆ 10-30 ಗಂಟೆಯಿಂದ 12-30 ಗಂಟೆವರೆಗೆ ಪಡೆದ ನಂತರ ಎರಡು ಭಾವಚಿತ್ರಗಳೊಂದಿಗೆ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿಯಲ್ಲಿ ಬೆಳಗ್ಗೆ 11-00 ಗಂಟೆ ನಂತರ ಪ್ರವೇಶ ಪತ್ರಗಳನ್ನು ಪಡೆಯಬಹುದು. ಹೆಚ್ಚಿನ ಮಾಹಿತಿಗೆ ಇನ್ಸ್‌ಪೆಕ್ಟರ್ ಶ್ರೀ ಬಸವೇಶ್ ಇವರನ್ನು ದೂರವಾಣಿ ಸಂಖ್ಯೆ 080-22352466 ಹಾಗೂ ಮೊಬೈಲ್ ಸಂಖ್ಯೆ 9480802407 ಸಂಪರ್ಕಿಸಬಹುದು. ಒಂದು ಮಾಧ್ಯಮ ಸಂಸ್ಥೆಯಿಂದ ಒಬ್ಬ ವರದಿಗಾರರು ಮತ್ತು ಒಬ್ಬ ಛಾಯಾಗ್ರಾಹಕ/ಕ್ಯಾಮರಾಮನ್‌ಗೆ ಸೇರಿದಂತೆ ಗರಿಷ್ಠ ಇಬ್ಬರಿಗೆ ಮಾತ್ರ ಪ್ರವೇಶಪತ್ರ ವಿತರಿಸಲಾಗುವುದು.

ಉಪ ನಿರ್ದೇಶಕರು, ವಾರ್ತಾ ಮತ್ತು .
. ಸಾರ್ವಜನಿಕ ಸಂಪರ್ಕ ಇಲಾಖೆ,
ಬೆಂಗಳೂರು ನಗರ ಜಿಲ್ಲೆ

## ಪತ್ರಿಕಾ ಪ್ರಕಟಣೆ

## ಮುದ್ರಿತ ಬೆಲೆಗಿಂತ ಹೆಚ್ಚು ಬೆಲೆಗೆ ಮಾರಾಟ: 30 ಮೊಕದ್ದಮೆ ದಾಖಲು

ಬೆಂಗಳೂರು, ಜನವರಿ 1 (ಕರ್ನಾಟಕ ವಾರ್ತೆ)

ಕಾನೂನು ಮಾಪನಶಾಸ್ತ್ರ ಇಲಾಖೆಯು ಡಿಸೆಂಬರ್ 29 ಮತ್ತು 30 ರಂದು ಬೆಂಗಳೂರು ನಗರದಲ್ಲಿನ ಪ್ರತಿಷ್ಠಿತ ಹೋಟೆಲ್/ರೆಸ್ಟೋರೆಂಟ್‌ಗಳ ಅನಿರೀಕ್ಷಿತ ತಪಾಸಣೆ ಕೈಗೊಂಡು ಪ್ಯಾಕೇಜ್ಡ್ ಡ್ರಿಂಕಿಂಗ್ ನೀರಿನ ಬಾಟಲ್‌ಗಳನ್ನು ಮುದ್ರಿತ ಬೆಲೆಗಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿದ್ದವರ ವಿರುದ್ಧ ಪೊಟ್ಟಣ ಸಾಮಗ್ರಿ ನಿಯಮಗಳ ಉಲ್ಲಂಘನೆಗಾಗಿ ಒಟ್ಟು 30 ಮೊಕದ್ದಮೆಗಳನ್ನು ಹೂಡಿ ತಪ್ಪಿತಸ್ಥರ ವಿರುದ್ಧ ನಿಯಮಾನುಸಾರ ಕ್ರಮ ಜರುಗಿಸಲಾಗುತ್ತಿದೆ.

ಪೊಟ್ಟಣ ಸಾಮಗ್ರಿಗಳನ್ನು ಮುದ್ರಿತ ಬೆಲೆಗಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡುವುದು ದಿ ಲೀಗಲ್ ಮೆಟ್ರಾಲಜಿ ಪೊಟ್ಟಣ ಸಾಮಗ್ರಿ ನಿಯಮಗಳಡಿಯಲ್ಲಿ ದಂಡನೀಯ ಅಪರಾಧವಾಗಿರುತ್ತದೆ. ಇಲಾಖೆಯು ಮುಂದಿನ ದಿನಗಳಲ್ಲಿ ತಪಾಸಣೆಗಳನ್ನು ತೀವ್ರಗೊಳಿಸಿ ಪ್ರಕರಣಗಳು ಮರುಕಳಿಸದಂತೆ, ತಪ್ಪಿಸ್ಥರ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದು.

ಸಾರ್ವಜನಿಕರು/ಗ್ರಾಹಕರು ಇಂತಹ ಪ್ರಕರಣಗಳನ್ನು ಗಮನಿಸಿದ್ದಲ್ಲಿ, ಈ ಇಲಾಖೆಗೆ ದೂರುಗಳನ್ನು ದೂರವಾಣಿ: 080–22342380/22260554/22262198 ಹಾಗೂ ಇ–ಮೇಲ್ cllm_lm_ka@nic.in ಮುಖಾಂತರ ನೀಡಬಹುದಾಗಿದೆ ಎಂದು ಕಾನೂನು ಮಾಪನಶಾಸ್ತ್ರ ಇಲಾಖೆಯ ಪ್ರಕಟಣೆ ತಿಳಿಸಿದೆ.
ಬಾಬು/ಕೆಎಂ

# ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

**ಬೆಂಗಳೂರು, ಜನವರಿ 1 (ಕರ್ನಾಟಕ ವಾರ್ತೆ)**

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ:03-01-2016ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ ಈ ಕೆಳಕಂಡ ಕಾರ್ಯಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1. ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "**ಉದ್ಯಾನವನದಲ್ಲಿ ಉದಯರಾಗ**" ಎಂಬ ಶೀರ್ಷಿಕೆಯಡಿ ಶ್ರೀ ಸ್ವಾಮಿ, ಚನ್ನಪಟ್ಟಣ ಇವರಿಂದ ಜನಪದ ಗೀತೆಗಳು, ಭಜನೆ ಮತ್ತು ತತ್ವಪದಗಳ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
2. ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "**ಉದ್ಯಾನವನದಲ್ಲಿ ಸಂಧ್ಯಾರಾಗ**" ಎಂಬ ಶೀರ್ಷಿಕೆಯಡಿ ಶ್ರೀಮತಿ. ಅರುಣಕುಮಾರಿ ಡಿ.ಎಂ. ಚಿಕ್ಕಬಳ್ಳಾಪುರ, ಇವರಿಂದ ಜನಪದ ಗೀತೆ ಮತ್ತು ಭಾವಗೀತೆ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
3. ಬೆಳಿಗ್ಗೆ 6.00 ಗಂಟೆಯಿಂದ ಸಂಜೆ 6.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

4. ಉದ್ಯಾನವನದ ಆವರಣದಲ್ಲಿ ಜೈವಿಕ್ ಕೃಷಿಕ್ ಸೊಸೈಟಿ(ರಿ), ಲಾಲ್‌ಬಾಗ್, ಬೆಂಗಳೂರುರವರು ತಮ್ಮ ಮಾರಾಟ ಮಳಿಗೆಯಲ್ಲಿ ಸಾವಯವ ಪದ್ಧತಿಯಲ್ಲಿ ಬೆಳೆದ ವಿವಿಧ ರೀತಿಯ ಹಣ್ಣುಗಳು ಮತ್ತು ಹಣ್ಣಿನ ಜ್ಯೂಸ್ ಮತ್ತು ಇತರೆ ಸಾವಯವ ಆಹಾರ ಪದಾರ್ಥಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
5. ಉದ್ಯಾನವನದ ಆವರಣದಲ್ಲಿ ಹಾಪ್‌ಕಾಮ್ಸ್, ಬೆಂಗಳೂರುರವರು ವಿವಿಧ Cut Fruits, Dry Fruits ಮತ್ತು ವಿವಿಧ ತಾಜಾ ಹಣ್ಣುಗಳು, ಪ್ಯಾಕ್ ಮಾಡಿದ ತಾಜಾ ತರಕಾರಿಗಳು ಹಾಗೂ ಹಣ್ಣಿನ ಜ್ಯೂಸ್‌ಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
6. ಉದ್ಯಾನವನದ ಆವರಣದಲ್ಲಿ ದಿ ನರ್ಸರಿಮೆನ್ ಕೋ-ಆಪರೇಟೀವ್ ಸೊಸೈಟಿ, ಲಾಲ್‌ಬಾಗ್, ಬೆಂಗಳೂರುರವರು ವಿವಿಧ ಅಲಂಕಾರಿಕ ಗಿಡಗಳು ಮತ್ತು ಉದ್ಯಾನವನ ಸಲಕರಣೆಗಳ ಮಾರಾಟವನ್ನು ಕೈಗೊಳ್ಳುತ್ತಾರೆ.
7. ಸಾರ್ವಜನಿಕ ಗ್ರಂಥಾಲಯ ಇಲಾಖೆ, ಬೆಂಗಳೂರುರವರ ವತಿಯಿಂದ ನಗರ ಕೇಂದ್ರ ಗ್ರಂಥಾಲಯ ಮತ್ತು ಇಂದಿರಾ ಪ್ರಿಯದರ್ಶಿನಿ ಮಕ್ಕಳ ಗ್ರಂಥಾಲಯದ ಆವರಣದಲ್ಲಿ ಪುಸ್ತಕ ಪ್ರದರ್ಶನವನ್ನು ಏರ್ಪಡಿಸಲಾಗಿದೆ.
8. ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ **ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ** ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

## ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:

**9. ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- **ಬೆಳಿಗ್ಗೆ 7.00 ಘಂಟೆಯಿಂದ 5.00 ಘಂಟೆಯವರೆಗೆ ಇನ್‌ಟ್ಯಾಕ್, ಬೆಂಗಳೂರು ಚಾಪ್ಟರ್ ರವರ ವತಿಯಿಂದ ಬೆಂಗಳೂರಿನ ಪಾರಂಪರಿಕ ಕಟ್ಟಡಗಳ ಕುರಿತಾದ ಛಾಯಾ ಚಿತ್ರ/ ಚಿತ್ರ ಪ್ರದರ್ಶನವನ್ನು ಏರ್ಪಡಿಸಲಾಗಿದೆ.**
- **ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ ಯೂನಿವರ್ಸ್ ಆರ್ಟ್ ಫೌಂಡೇಶನ್ ಸಂಸ್ಥೆಯ ವತಿಯಿಂದ ಭರತನಾಟ್ಯ ನೃತ್ಯ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**
- **ಬೆಳಿಗ್ಗೆ 8.00 ಘಂಟೆಯಿಂದ 9.00 ಗಂಟೆಯವರೆಗೆ ಕೆ.ಎಸ್.ಆರ್.ಪಿ. ಪೋಲೀಸ್ ಇಲಾಖೆ ಬೆಂಗಳೂರು ರವರಿಂದ ಪೋಲೀಸ್ ಬ್ಯಾಂಡ್ ಸಂಗೀತ ಕಾರ್ಯಕ್ರಮ ಏರ್ಪಡಿಸಲಾಗಿದೆ.**
- **ಬೆಳಿಗ್ಗೆ 09.00 ಗಂಟೆಯಿಂದ 10.00 ಗಂಟೆಯವರೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಬಾಲಭವನ ಸೊಸೈಟಿ, ಬೆಂಗಳೂರುರವರ ಸಹಯೋಗದೊಂದಿಗೆ "ಸ್ಫುರಣ ಸ್ಕೂಲ್ ಅಫ್ ಡಾನ್ಸ್", ಬೆಂಗಳೂರುರವರಿಂದ ನೃತ್ಯ ಪ್ರದರ್ಶನ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**
- **ಸಂಜೆ 4.00 ಗಂಟೆಯಿಂದ 5.00 ಗಂಟೆಯವರೆಗೆ ಕನ್ನಡ ಅಭಿವೃದ್ಧಿ ಪ್ರಾಧಿಕಾರ ಮತ್ತು ಅಕ್ಷಯ ಫೌಂಡೇಷನ್ ರವರ ಸಹಯೋಗದೊಂದಿಗೆ ಮಧುರಚೆನ್ನ ರವರ ಸಾಹಿತ್ಯ ಚಿಂತನೆ ಬಗ್ಗೆ ಸತ್ಯಮಂಗಲ ಆರ್. ಮಹದೇವ ರವರಿಂದ ಕನ್ನಡ ಉಪನ್ಯಾಸ ಕಾರ್ಯಕ್ರಮ ಏರ್ಪಡಿಸಲಾಗಿದೆ.**

- **ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ**

- **ಬೆಳಿಗ್ಗೆ 7.00 ಗಂಟೆಯಿಂದ 12.00 ಗಂಟೆಯವರೆಗೆ ಶ್ರೀಮತಿ ಜಯಶ್ರೀ ರವರ ವತಿಯಿಂದ "ಮಿನಿಯೇಚರ್ ಗಾರ್ಡನ್" ಬಗ್ಗೆ ವಸ್ತು ಪ್ರದರ್ಶನ ಮತ್ತು ಮಾರಾಟ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.**

- ಬೆಳಿಗ್ಗೆ 7.00 ಗಂಟೆಯಿಂದ ಬೆಳಿಗ್ಗೆ 9.00 ಗಂಟೆಯವರೆಗೆ ರೇಷ್ಮೆ ಇಲಾಖೆಯ ವತಿಯಿಂದ ರೇಷ್ಮೆಗೂಡಿನಿಂದ ಮಾಡಿದ ವಿವಿಧ ವಿನ್ಯಾಸದ ಹಾರಗಳು, ಅಲಂಕಾರಿಕ ಮತ್ತು ಇತರೆ ಕರಕುಶಲ ವಸ್ತುಗಳ ಪ್ರದರ್ಶನ ಮತ್ತು ಮಾರಾಟ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. .
- ಬೆಳಿಗ್ಗೆ 6.00 ಗಂಟೆಯಿಂದ ಬೆಳಿಗ್ಗೆ 12.00 ಗಂಟೆಯವರೆಗೆ ವಿದ್ಯಾರಣ್ಯ ಸಂಸ್ಥೆ ವತಿಯಿಂದ ಬುದ್ದಿ ವಿಕಲಚೇತನ ಮಕ್ಕಳಿಂದ ವಿವಿಧ ವೇಷ ಭೂಷಣ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಬಾಬು/ಕೆಎಂ

# Lake Management

Bangalore, January 1(Karnataka Information)

MGIRED has been facilitating formation of a voluntary citizen group for management of Rachenahalli lake. The citizen group with the support of MGIRED has been interacting with local administration [BBMP, BDA etc,] to ensure lake is protected. In this regard on January 3, 2016 lake awareness day is being observed. The events are: Walk along the kere, Picture the kere – Drawing / Sketching. Boat Ride – Rs. 30/- per person, On the spot demonstration of landscape painting by qualified artists, Exhibition, Support the cause – Signature campaign contact : 9448241497 / 994597220.

# ಕೆರೆ ಸಂರಕ್ಷಣೆ

**ಬೆಂಗಳೂರು, ಜನವರಿ 1 (ಕರ್ನಾಟಕ ವಾರ್ತೆ)**

ಮಹಾತ್ಮಗಾಂಧಿ ಗ್ರಾಮೀಣ ಇಂಧನ ಮತ್ತು ಅಭಿವೃದ್ಧಿ ಸಂಸ್ಥೆಯು ರಾಚೇನಹಳ್ಳಿ ಕೆರೆ ನಿರ್ವಹಣೆಗಾಗಿ ಸ್ವಯಂಪ್ರೇರಿತ ನಾಗರಿಕ ಗುಂಪು ರಚನೆಗೆ ಅನುಕೂಲ ಮಾಡಲಾಗಿದೆ. ಸಂಸ್ಥೆಯು ಸ್ವಯಂಪ್ರೇರಿತ ನಾಗರಿಕ ಗುಂಪು ಮತ್ತು ಸ್ಥಳೀಯ ಆಡಳಿತ [ಬಿ.ಬಿ.ಎಂ.ಪಿ, ಬಿ.ಡಿ.ಎ ಇತ್ಯಾದಿಗಳ] ಜೊತೆ ಸಂಪರ್ಕ ಸಾಧಿಸಿ ಕೆರೆಯ ರಕ್ಷಣೆ ಮಾಡುತ್ತಿದೆ. ಈ ನಿಟ್ಟಿನಲ್ಲಿ ಜನವರಿ 3, 2016 ರಂದು "ಸರೋವರದ ಜಾಗೃತಿ ದಿನ" ವನ್ನಾಗಿ ಆಚರಿಸಲಾಗುತ್ತಿದೆ.

ಕಾರ್ಯಕ್ರಮದ ವಿವರಗಳೆಂದರೆ ಕೆರೆಯ ಸುತ್ತ ವಿಹರಿಸುವುದು. ಕೆರೆಯ ದೃಶ್ಯ : ಚಿತ್ರಕಲೆ/ ಚಿತ್ರಿಸುವಿಕೆಯ ಸ್ಪರ್ದೆ ದೋಣಿ ವಿಹಾರ – ರೂ. 30/- ಪ್ರತಿ ವ್ಯಕ್ತಿಗೆ ಸ್ಥಳದಲ್ಲಿಯೇ ಅರ್ಹ ಕಲಾವಿದರಿಂದ ಭೂಲಕ್ಷಣ ಚಿತ್ರಕಲೆ ಪ್ರದರ್ಶನ ಬೆಂಬಲಿಸಲು ಕಾರಣ – ಸಹಿ ಸಂಗ್ರಹ ಅಭಿಯಾನ **ಹೆಚ್ಚಿನ ವಿವರಗಳಿಗೆ ಸಂಪರ್ಕಿಸಿ : 9448241497 / 9945972200**

**ಬಾಬು/ಕೆಎಂ**